ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 6/2/2020

## ಸಚಿವಾಕಾಂಕ್ಷಿಗಳಿಗೆ ಖುದ್ದು ಸಿಎಂ ಕರೆ

ಬೆಂಗಳೂರು: ನೂತನ ಸಚಿವರಾಗಲಿರುವ 10 ಮಂದಿಗೂ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಬುಧವಾರ ಖುದ್ದಾಗಿ ಕರೆ ಮಾಡಿ ಗುರುವಾರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸುವಂತೆ ಆಹ್ವಾನ ನೀಡಿದ್ದಾರೆ.



ಇದರಿಂದ ಸಂತಸಗೊಂಡ ಸಚಿವಾಕಾಂಕ್ಷಿಗಳು ಯಡಿಯೂರಪ್ಪ ನಿವಾಸಕ್ಕೆ ಭೇಟಿ ನೀಡಿ, ಕೊಟ್ಟ ಮಾತು ಉಳಿಸಿಕೊಂಡಿದ್ದಕ್ಕೆ ಧನ್ಯವಾದ ಅರ್ಪಿಸಿದರು. ಬಿ.ಸಿ.ಪಾಟೀಲ್, ಶಿವರಾಮ ಹೆಬ್ಬಾರ್, ಎಸ್.ಟಿ.ಸೋಮಶೇಖರ್ ಬುಧವಾರ ಸಿಎಂ ಬಿಎಸ್‌ವೈ ಅವರನ್ನು ಭೇಟಿಯಾಗಿ ಧನ್ಯವಾದ ಹೇಳಿದರು. ಈ ಮಧ್ಯೆ, ಉಮೇಶ್ ಕತ್ತಿ ಅವರು ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿ, ತಮಗೂ ಮಂತ್ರಿಗಿರಿ ಕೊಡುವಂತೆ ಮನವಿ ಮಾಡಿದರು. ನಂತರ ಸುದ್ದಿಗಾರರ ಜತೆ ಮಾತನಾಡಿದ ಯಡಿಯೂರಪ್ಪ, ಕತ್ತಿ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳುವುದು ಖಚಿತ ಎಂದರಲ್ಲದೆ, ಕುಮಟಳ್ಳಿ ಅವರಿಗೆ ಸಚಿವರಲ್ಲದ ಬೇರೆ ಹೆಚ್ಚಿನ ಹೊಣೆ ನೀಡಲಾಗುವುದು ಎಂದರು.